# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 01 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1314 |
| 02 | ಮಾನ್ಯ ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ. ಆರ್. ಧರ್ಮಸೇನ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 03 | ಉತ್ತರಿಸುವ ದಿನಾಂಕ | : | 21-12-2018 |
| 04 | ಉತ್ತರಿಸುವ ಸಚಿವರು. | : | ಉಪ ಮುಖ್ಯಮಂತ್ರಿರವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು – ಮೈಸೂರು ಮುಖ್ಯ ರಸ್ತೆಯಲ್ಲಿ ಇತ್ತೀಚಿಗೆ ವಾಹನ ಸಂಚಾರ ಹೆಚ್ಚಾಗಿದ್ದು, ಅದರಲ್ಲೂ ಶನಿವಾರ ಭಾನುವಾರಗಳಲ್ಲಿ ದಟ್ಟಣೆ ತೀವ್ರವಾಗಿರುವುದರಿಂದ ಸುಗಮ ಸಂಚಾರಕ್ಕೆ ಪರ್ಯಾಯ ವ್ಯವಸ್ಥೆ ಮಾಡಲು ಸರ್ಕಾರ ಯೋಚಿಸಿದೆಯೇ; ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗುವುದು; | ಸರ್ಕಾರವು ಮೈಸೂರು-ಬೆಂಗಳೂರು ರಸ್ತೆಯನ್ನು ರಾಷ್ಟ್ರೀಯ ಹೆದ್ದಾರಿಯ ಗುಣ ವಿಶೇಷಣೆಗಳಿಗೆ ಅನುಗುಣವಾಗಿ ವೈಜ್ಞಾನಿಕ ರೀತಿಯಲ್ಲಿ ಅಭಿವೃದ್ಧಿಪಡಿಸಿ, ಸರ್ವೀಸ್ ರಸ್ತೆಗಳು ಸೇರಿದಂತೆ 08 ಪಥಗಳ ಜೋಡಿ ರಸ್ತೆಯನ್ನು ನಿರ್ಮಿಸುವ ಯೋಜನೆಯ ಪ್ರಸ್ತಾವನೆ ಇದ್ದು, ಶೀಘ್ರದಲ್ಲಿಯೇ ಯೋಜನೆಯ ಕಾಮಗಾರಿ ಪ್ರಾರಂಭವಾಗಲಿದೆ.<br><br>**ದಟ್ಟಣೆಯ ನಿವಾರಣೆಗಾಗಿ ಈಗಾಗಲೇ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿರುತ್ತದೆ.**<br><br>1) ಮೈಸೂರು ರಸ್ತೆಯ ಸಂಚಾರ ವ್ಯಾಪ್ತಿಯು ಬ್ಯಾಟರಾಯನಪುರ, ವಿ.ವಿ.ಪುರಂ ಹಾಗೂ ಕೆಂಗೇರಿ ಸಂಚಾರ ಪೊಲೀಸ್ ಠಾಣೆ ಸರಹದ್ದಿಗೆ ಸೇರಿರುತ್ತದೆ. ಈ ಠಾಣೆಗಳ ಪೊಲೀಸ್ ನಿರೀಕ್ಷಕರು ಪೀಕ್ ಹವರ್ಸ್‌ನಲ್ಲಿ ಪ್ರಮುಖ ಜಂಕ್ಷನ್‌ಗಳಲ್ಲಿ ವಾಹನ ದಟ್ಟಣೆ ನಿವಾರಣೆ ಮಾಡಲು ಸಂಚಾರ ಕರ್ತವ್ಯ ನಿರ್ವಹಿಸುತ್ತಾರೆ. ಅಲ್ಲದೆ, ಈ ಎರಡು ಠಾಣೆಯ ವ್ಯಾಪ್ತಿಗೆ ಇಬ್ಬರು ಸಹಾಯಕ ಪೊಲೀಸ್ ಆಯುಕ್ತರಿದ್ದು, ಇವರುಗಳು ಸಹ ಪೀಕ್ ಹವರ್ಸ್‌ನಲ್ಲಿ ಕೆಲಸ ಮಾಡಿ ಸುಗಮ ಸಂಚಾರ ಸುವ್ಯವಸ್ಥೆಯ ಬಗ್ಗೆ ಹೆಚ್ಚಿನ ಗಮನಹರಿಸಿ ಕಾಲ ಕಾಲಕ್ಕೆ ಸಿಬ್ಬಂದಿಯವರಿಗೆ ಮಾರ್ಗದರ್ಶನ ನೀಡುತ್ತಿರುತ್ತಾರೆ.<br><br>2) ಮೈಸೂರು ರಸ್ತೆ ಉದ್ದಕ್ಕೂ ಅಗತ್ಯ ಹೆಚ್ಚುವರಿ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಜಂಕ್ಷನ್‌ಗಳಲ್ಲಿ ಮತ್ತು ಕೂಡು ರಸ್ತೆಗಳಲ್ಲಿ ಹಾಗೂ ದಟ್ಟಣೆ ಇರುವ ಬಸ್ ನಿಲ್ದಾಣಗಳಲ್ಲಿ 2 ಪಾಳಿಗಳಲ್ಲಿ ನಿಯೋಜಿಸಲಾಗುತ್ತಿದೆ. |

..2

| | | |
|---|---|---|
| | | 3)ಟೋಯಿಂಗ್ ವಾಹನಗಳನ್ನು ಮೀಸಲಾಗಿಟ್ಟು-ಕೊಂಡು ರಸ್ತೆಯಲ್ಲಿ ಕೆಟ್ಟು ನಿಂತ ವಾಹನಗಳನ್ನು ತೆಗೆದು ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತಿದೆ.<br>4) ಮೈಸೂರು ರಸ್ತೆಯಲ್ಲಿ ಮೆಟ್ರೋಕಾಮಗಾರಿ-2ನೇ ಹಂತದ ಮೂಲಕ ಸಂಪರ್ಕ ಕಲ್ಪಿಸಲು ಕ್ರಮಕೈಗೊಂಡಿದೆ ಪ್ರಸ್ತುತ ಕಾಮಗಾರಿ ನಡೆಯುತ್ತಿದ್ದು ಕಾಮಗಾರಿ ಪೂರ್ಣಗೊಂಡ ನಂತರ ವಾಹನ ದಟ್ಟಣೆಯಲ್ಲಿ ಕಡಿಮೆಯಾಗುತ್ತದೆ.<br>5) ಬೆಂಗಳೂರು ಮತ್ತು ಮೈಸೂರು ನಡುವೆ ಹೆಚ್ಚಿನ ಸಂಖ್ಯೆಯ ರೈಲು ವ್ಯವಸ್ಥೆಯನ್ನು ಕಲ್ಪಿಸಲಾಗಿದ್ದು ಸಾರ್ವಜನಿಕರಿಗೆ ಸಾರ್ವಜನಿಕ ಸಾರಿಗೆ ಮುಖಾಂತರ ಸಂಚರಿಸುವಂತೆ ತಿಳುವಳಿಕೆ ನೀಡಿ ಕ್ರಮಕೈಗೊಳ್ಳಲಾಗಿರುತ್ತದೆ.<br>6) ರಾಮನಗರ ಜಿಲ್ಲಾ ವ್ಯಾಪ್ತಿಯ ಮೂಲಕ ಹಾದು ಹೋಗುವ ಬೆಂಗಳೂರು-ಮೈಸೂರು ಮುಖ್ಯರಸ್ತೆ ಎನ್.ಹೆಚ್-275ರಲ್ಲಿ ಸಂಚಾರ ನಿಯಂತ್ರಣ ಮತ್ತು ಸುಗಮ ಸಂಚಾರಕ್ಕಾಗಿ ರಾಮನಗರ ಜಿಲ್ಲೆ ಸಂಚಾರ ಪೊಲೀಸ್ ಸಂಚಾರ ಮತ್ತು ಪ್ರತಿ ದಿನ ಸಂಚಾರ ನಿಯಂತ್ರಣ ಮತ್ತು ಸುಗಮ ಸಂಚಾರಕ್ಕಾಗಿ ಸಿಬ್ಬಂದಿಯವರನ್ನು ನೇಮಕ ಮಾಡಲಾಗುತ್ತಿರುತ್ತದೆ.<br>7) ಮಂಡ್ಯ ಜಿಲ್ಲಾ ವ್ಯಾಪ್ತಿಯ ಮೂಲಕ ಹಾದು ಹೋಗುವ ಬೆಂಗಳೂರು-ಮೈಸೂರು ಮುಖ್ಯರಸ್ತೆಯಲ್ಲಿ ಸಂಚಾರ ನಿಯಂತ್ರಣಕ್ಕಾಗಿ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನೇಮಿಸಿ ವಾಹನಗಳ ಸುಗಮ ಸಂಚಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗಿರುತ್ತದೆ. |
| ಆ) | ವಾಹನ ಸುಗಮ ಸಂಚಾರಕ್ಕೆ ಅಗತ್ಯವಿರುವ ಸಂಚಾರಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಬೆಂಗಳೂರು-ಮೈಸೂರು ರಸ್ತೆಯಲ್ಲಿ ವಾಹನಗಳ ಸುಗಮ ಸಂಚಾರಕ್ಕೆ ಅಡಚಣೆಯಾಗದಂತೆ ಅಗತ್ಯವಿರುವ ಪೊಲೀಸ್ ಸಿಬ್ಬಂದಿ ಮತ್ತು ಗೃಹ ರಕ್ಷಕ ದಳದ ಸಿಬ್ಬಂದಿಯನ್ನು ನಿಯೋಜಿಸಿ ವಾಹನ ಸಂಚಾರದಟ್ಟಣೆ ನಿಯಂತ್ರಿಸಲಾಗಿರುತ್ತದೆ. |

ಸಂಖ್ಯೆ: ಒಇ 16 ಬೆಳಗಾವಿ 2018

(ಡಾ.ಜಿ.ಪರಮೇಶ್ವರ)
ಉಪ ಮುಖ್ಯಮಂತ್ರಿ